10,000 ರೂಪಾಯಿಗಳ ಬದಲಾಗಿ ಕೇವಲ 7,000 ರೂಪಾಯಿಗಳನ್ನು ನೀಡಿ ವಂಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಎಷ್ಟು ಮಂದಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಯಿತು ಹಾಗೂ ಫಲಾನುಭವಿಗಳ ಆಯ್ಕೆಗೆ ಅನುಸರಿಸಿದ ಮಾನದಂಡವೇನು?

ಶ್ರೀ ಎಸ್. ಸುರೇಶ್‌ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) ಗಮನಕ್ಕೆ ಬಂದಿದೆ.

ಆ) ಈ ಉದ್ದೇಶಕ್ಕಾಗಿ ಲಭ್ಯವಿದ್ದ ರೂ.10 ಲಕ್ಷ ಅನುದಾನದಲ್ಲಿ 125 ಫಲಾನುಭವಿಗಳಿಗೆ ತಲಾ ರೂ.8,000/– ಮೊತ್ತದ ಸಾಮಾಗ್ರಿಗಳನ್ನು ವಿತರಿಸಲಾಗಿದೆ.

ಇ) ಲಿಡ್ಕರ್ ಸಂಸ್ಥೆಯಿಂದ ತರಬೇತಿ ಪಡೆದು ಪ್ರಮಾಣ ಪತ್ರವನ್ನು ಹಾಜರುಪಡಿಸಿದ 125 ಜನ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ.

ಬೆಳ್ತಂಗಡಿ ಕ್ಷೇತ್ರದಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ

246 (116) ಶ್ರೀ ವಸಂತಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ವಿಧಾನಸಭಾ ಕ್ಷೇತ್ರದಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸದೇ ಇರುವ ರೈತರ ಕೃಷಿ ಪಂಪುಸೆಟ್‌ಗಳ ಸಂಖ್ಯೆ ಎಷ್ಟು; (ಸ್ವೀಕರಿಸಿದ ಅರ್ಜಿಗಳಲ್ಲಿ)

ಆ) ಅವುಗಳಲ್ಲಿ ವಿದ್ಯುತ್ ಸಂಪರ್ಕ ನೀಡಲು ಇರುವ ತೊಂದರೆಗಳೇನು;

ಇ) ಎಷ್ಟು ಸಮಯದೊಳಗೆ ರೈತರ ನೀರಾವರಿ ಪಂಪುಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ನೀಡಲಾಗುವುದು?

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಯವರು) :

ಅ) ಬೆಳ್ತಂಗಡಿ ವಿಧಾನ ಸಭಾ ಕ್ಷೇತ್ರದಲ್ಲಿ ಅರ್ಜಿ ನೋಂದಾಯಿಸಿದ್ದು, ಕಂಪನಿಯಿಂದ ಕಾರ್ಯಾದೇಶ ನೀಡಿ ವಿದ್ಯುತ್ ಸಂಪರ್ಕ ಪಡೆಯದೆ ಬಾಕಿ ಇರುವ ಅರ್ಜಿಗಳ ಒಟ್ಟು ಸಂಖ್ಯೆ : 97.

ಆ) ವಿದ್ಯುತ್ ಸಂಪರ್ಕ ಪಡೆಯಲು ಬಾಕಿ ಇರುವ ಎಲ್ಲಾ ಅರ್ಜಿದಾರರಿಗೆ ಪತ್ರ ಮುಖೇನ ಈಗಾಗಲೇ ತಿಳಿಸಿದ್ದು, ಸಂಬಂಧಪಟ್ಟ ಅರ್ಜಿದಾರರು ಮುಂದೆ ಬಂದಲ್ಲಿ ತಮ್ಮ ಕೃಷಿ ನೀರಾವರಿ ಪಂಪು ಸೆಟ್ಟುಗಳಿಗೆ ವಿದ್ಯುತ್ ಸಂಪರ್ಕ ಪಡೆಯಬಹುದಾಗಿದೆ.

ಇ) ಕಂಪನಿ ವತಿಯಿಂದ ಈಗಾಗಲೇ ಕಾರ್ಯಾದೇಶ ನೀಡಿರುವು ದರಿಂದ ಹಗೂ ವಿದ್ಯುತ್ ಸಂಪರ್ಕ ಪಡೆಯಲು ಸಂಬಂಧಿತರಿಗೆ ಪತ್ರ ಮುಖೇನ ತಿಳಿಸಲಾಗಿದ್ದು, ಕಂಪನಿಯ ನಿಯಮಾವಳಿಗಳನ್ನು ಪಾಲಿಸಿದ ಕೂಡಲೇ ವಿದ್ಯುತ್ ಸಂಪರ್ಕ ನೀಡಲು ಕ್ರಮ ಕೈಗೊಳ್ಳಲಾಗುವುದು. ಪ್ರಸಕ್ತ ಸಾಲಿನಲ್ಲಿ ಮ.ವಿ.ಸ.ಕಂಪನಿಯಲ್ಲಿ ಕೃಷಿ ನೀರಾವರಿ ಪಂಪು ಸೆಟ್ಟುಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ನಿಗದಿ ಪಡಿಸಲಾದ ಗುರಿಯನ್ನು ಈಗಾಗಲೇ ಸಾಧಿಸಲಾಗಿದೆ. ಆದಾಗ್ಯೂ ಬಾಕಿ ಉಳಿದಿರುವ 97 ಕಾಮಗಾರಿಗಳನ್ನು ಕೂಡಲೇ ಕೈಗೆತ್ತಿಕೊಂಡು ಸಂಪೂರ್ಣಗೊಳಿಸಲಾಗುವುದು.

ಬೆಳ್ತಂಗಡಿ ತಾಲ್ಲೂಕಿನ ಕೆಲವು ಗ್ರಾಮಗಳಿಗೆ ವಿದ್ಯುತ್ ಸರಬರಾಜು ಮಾಡುವ ಬಗ್ಗೆ

247 (117) ಶ್ರೀ ವಸಂತಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕಿನ ಕೆಲವು ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿಗೆ ತಂತಿಗಳನ್ನು ಅಳವಡಿಸಲು ಮರದ ಕಂಬಗಳನ್ನು ಉಪಯೋಗಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ತಾಲ್ಲೂಕಿನಲ್ಲಿ ಒಟ್ಟು ಎಷ್ಟು ಮರದ ಕಂಬಗಳನ್ನು ಉಪಯೋಗಿಸಲಾಗಿದೆ?

ಇ) ಮರದ ಕಂಬಗಳನ್ನು ಅಳವಡಿಸಲು ಇಲಾಖೆಯ ನಿಯಮಗಳಲ್ಲಿ ಅವಕಾಶ ಇದೆಯೇ?

ಈ) ಮರದ ಕಂಬಗಳ ಬದಲಿಗೆ ಕಾಂಕ್ರೀಟ್ ಕಂಬಗಳನ್ನು ಯಾವಾಗ ಅಳವಡಿಸಲಾಗುವುದು?